**ಕರ್ನಾಟಕ ಸರ್ಕಾರ**
**ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ**
**(ಆಡಳಿತ ಸುಧಾರಣೆ)**

ಸಂಖ್ಯೆ:ಸಿಆಸುಇ (ಆಸು)130 ಆರ್‌ಟಿಐ 2023

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:19 -07-2023.

## ಸುತ್ತೋಲೆ

ವಿಷಯ: ಮಾಹಿತಿ ಹಕ್ಕು ಅಧಿನಿಯಮ 2005ರ ಸಮರ್ಪಕ ನಿರ್ವಹಣೆ ಕುರಿತು.
ಉಲ್ಲೇಖ: ಮಾನ್ಯ ರಾಜ್ಯ ಮುಖ್ಯ ಮಾಹಿತಿ ಆಯುಕ್ತರು, ಕರ್ನಾಟಕ ಮಾಹಿತಿ ಆಯೋಗ, ಇವರ ಅಧ್ಯಕ್ಷತೆಯಲ್ಲಿ ದಿನಾಂಕ: 04.05.2023ರಂದು ನಡೆದ ಸಭೆಯ ತೀರ್ಮಾನಗಳು.

---

ಮಾಹಿತಿ ಹಕ್ಕು ಅಧಿನಿಯಮ, 2005ರಲ್ಲಿ ಪ್ರದತ್ತವಾದ ಕರ್ತವ್ಯಗಳನ್ನು ಸಾರ್ವಜನಿಕ ಮಾಹಿತಿ ಪ್ರಾಧಿಕಾರಗಳು ಸರಿಯಾಗಿ ನಿರ್ವಹಿಸದೆ ಇರುವುದನ್ನು ಗಮನಿಸಿದ ಕರ್ನಾಟಕ ಮಾಹಿತಿ ಆಯೋಗವು ರಾಜ್ಯ ಮುಖ್ಯ ಮಾಹಿತಿ ಆಯುಕ್ತರು, ಕರ್ನಾಟಕ ಮಾಹಿತಿ ಆಯೋಗ, ಇವರ ಅಧ್ಯಕ್ಷತೆಯಲ್ಲಿ ದಿನಾಂಕ:04.05.2023ರಂದು ಸಭೆಯನ್ನು ನಡೆಸಿ, ಸದರಿ ಸಭೆಯ ಈ ಕೆಳಕಂಡ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ನಿರ್ಣಯಿಸಲಾಗಿದೆ.

1. ರಾಜ್ಯದಲ್ಲಿ ಪ್ರಥಮ ಮೇಲ್ಮನವಿ ಪ್ರಾಧಿಕಾರಗಳು ತಮ್ಮ ಕರ್ತವ್ಯಗಳನ್ನು ನಿಯಮಾನುಸಾರವಾಗಿ ನಿರ್ವಹಿಸದ ಕಾರಣ, ಕರ್ನಾಟಕ ಮಾಹಿತಿ ಆಯೋಗದಲ್ಲಿ ದ್ವಿತೀಯ ಮೇಲ್ಮನವಿ ಮತ್ತು ದೂರು ಪ್ರಕರಣಗಳು ಹೆಚ್ಚಿನ ಸಂಖ್ಯೆಯಲ್ಲಿ ದಾಖಲಾಗುತ್ತಿದ್ದು, ಆಯೋಗಕ್ಕೆ ಹೆಚ್ಚಿನ ಹೊರೆಯಾಗಿರುತ್ತದೆ. ಆದುದರಿಂದ, ಎಲ್ಲಾ ಪ್ರಥಮ ಮೇಲ್ಮನವಿ ಪ್ರಾಧಿಕಾರಗಳು ಮಾಹಿತಿ ಹಕ್ಕು ಅಧಿನಿಯಮ 2005ರ ಕಲಂ 19(1)ರಡಿ ಪ್ರದತ್ತವಾಗಿರುವ ಶಾಸನಬದ್ಧ ಕರ್ತವ್ಯವನ್ನು ಸರಿಯಾಗಿ ನಿರ್ವಹಿಸುವುದು.

2. ಎಲ್ಲಾ ಇಲಾಖೆಗಳು ತಮ್ಮ ಕಛೇರಿ ವ್ಯಾಪ್ತಿಗೆ ಸಂಬಂಧಿಸಿದಂತೆ, ಸಾರ್ವಜನಿಕ ಮಾಹಿತಿ ಅಧಿಕಾರಿ ಮತ್ತು ಪ್ರಥಮ ಮೇಲ್ಮನವಿ ಪ್ರಾಧಿಕಾರಗಳ ವಿವರಗಳನ್ನು ಸಾರ್ವಜನಿಕರಿಗೆ ಸುಲಭವಾಗಿ ಸಿಗುವಂತೆ ಆಯಾ ಇಲಾಖೆಗಳ ಜಾಲತಾಣದಲ್ಲಿ ಕಾಲಕಾಲಕ್ಕೆ ಇಂದೀಕರಿಸಿ ಇಲಾಖಾ ಮುಖ್ಯಸ್ಥರು ಪ್ರಕಟಿಸತಕ್ಕದ್ದು.

3. ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರವು, ಮಾಹಿತಿ ಹಕ್ಕು ಅಧಿನಿಯಮ 2005ರ ಕಲಂ-6(1) ಮತ್ತು 19(1)ರಡಿ ಸಾರ್ವಜನಿಕ ಮಾಹಿತಿ ಅಧಿಕಾರಿ ಮತ್ತು ಪ್ರಥಮ ಮೇಲ್ಮನವಿ ಪ್ರಾಧಿಕಾರಗಳನ್ನು ನಾಮನಿರ್ದೇಶನ ಮಾಡಿ ಹೊರಡಿಸುವ ಪ್ರಕಟಣೆ/ಅಧಿಸೂಚನೆಯ ಪ್ರತಿಯನ್ನು ಕಡ್ಡಾಯವಾಗಿ ಕರ್ನಾಟಕ ಮಾಹಿತಿ ಆಯೋಗಕ್ಕೆ ಇಲಾಖಾ ಮುಖ್ಯಸ್ಥರು ಸಲ್ಲಿಸುವುದು.

4. ಪತ್ರಾಂಕಿತ ಅಧಿಕಾರಿಯ ದರ್ಜೆಗಿಂತ ಕಡಿಮೆಯಿಲ್ಲದ ಅಧಿಕಾರಿಗಳನ್ನೇ ಸಾರ್ವಜನಿಕ ಮಾಹಿತಿ ಅಧಿಕಾರಿಯನ್ನಾಗಿ ಮಾಡುವುದು ಅಥವಾ ಯಾವ ಕಛೇರಿಯಲ್ಲಿ ಪತ್ರಾಂಕಿತ ದರ್ಜೆಯ ಅಧಿಕಾರಿ ಲಭ್ಯವಿರುವುದಿಲ್ಲವೋ ಅಂತಹ ಕಛೇರಿಗಳಲ್ಲಿ ಒಬ್ಬ ಜವಾಬ್ದಾರಿಯುತ ಅಧಿಕಾರಿ/ಸಿಬ್ಬಂದಿಯನ್ನು ಸಾರ್ವಜನಿಕ ಮಾಹಿತಿ ಅಧಿಕಾರಿಯನ್ನಾಗಿ ನೇಮಕ ಮಾಡುವುದು.

....2

ಮೇಲಿನ ಸೂಚನೆಗಳನ್ನು ಸರ್ಕಾರದ ಎಲ್ಲಾ ಇಲಾಖೆಗಳು ಪಾಲಿಸುತ್ತಿರುವ ಬಗ್ಗೆ ಇಲಾಖೆಗಳ ಮುಖ್ಯಸ್ಥರು/ಕಾರ್ಯದರ್ಶಿಗಳು ಕಟ್ಟುನಿಟ್ಟಿನ ಮೇಲ್ವಿಚಾರಣೆ ಮಾಡತಕ್ಕದ್ದು. ಒಂದೊಮ್ಮೆ ಈ ಪ್ರಕ್ರಿಯೆಯಲ್ಲಿ ಯಾವುದೇ ಲೋಪ-ದೋಷಗಳು ಕಂಡುಬಂದಲ್ಲಿ, ಮಾಹಿತಿ ಹಕ್ಕು ಅಧಿನಿಯಮ, 2005ರ ಆಸ್ಪದದ ಅಡಿಯಲ್ಲಿ ಸಕ್ಷಮ ಪ್ರಾಧಿಕಾರಗಳು ಸೂಕ್ತ ಕ್ರಮವಹಿಸತಕ್ಕದ್ದು.

O/C

(ಮುನಿಶ್ ಮೌದ್ಗಿಲ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಿಆಸುಇ (ಆಡಳಿತ ಸುಧಾರಣೆ).

**ಇವರಿಗೆ:**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಸರ್ಕಾರದ ಕಾರ್ಯದರ್ಶಿಗಳು.
2. ಎಲ್ಲಾ ಇಲಾಖಾ ಮುಖ್ಯಸ್ಥರು
3. ಎಲ್ಲಾ ವಿಭಾಗದ ಪ್ರಾದೇಶಿಕ ಆಯುಕ್ತರು
4. ಎಲ್ಲಾ ಜಿಲ್ಲಾಧಿಕಾರಿಗಳು
5. ಎಲ್ಲಾ ಜಿಲ್ಲಾಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
6. ಎಲ್ಲಾ ನಿಗಮ ಮತ್ತು ಮಂಡಳಿಗಳ ಮುಖ್ಯಸ್ಥರು
7. ಶಾಖಾ ರಕ್ಷಾ ಕಡತ/ ಹೆಚ್ಚಿನ ಪ್ರತಿ

(2.6.7)
20/7/23

**ಮಾಹಿತಿ ಪ್ರತಿ**:
ಕಾರ್ಯದರ್ಶಿ, ಕರ್ನಾಟಕ ಮಾಹಿತಿ ಆಯೋಗ, ಬೆಂಗಳೂರು.